# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 423 (526) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಕೋಲಾರ ಜಿಲ್ಲೆಯ ಗ್ರಾಮೀಣ ಭಾಗ ಹಾಗೂ ಗಡಿ ಭಾಗದಲ್ಲಿ ನಕಲಿ ವೈದ್ಯರ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |
| ಆ) | ಹಾಗಿದ್ದಲ್ಲಿ ಸರ್ಕಾರ ಇದುವರೆಗೂ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಿದೆ (ಸಂಪೂರ್ಣ ವಿವರಗಳನ್ನು ಒದಗಿಸುವುದು). | ಈವರೆಗೆ ಒಟ್ಟು 103 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ವಿವರವನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |
| ಇ) | ನಕಲಿ ವೈದ್ಯರು ಕೇವಲ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಓದಿದವರು ವೈದ್ಯ ವೃತ್ತಿ ನಡೆಸುತ್ತಿದ್ದಾರೆಂಬುದು ಸರ್ಕಾರದ ಗಮನಕ್ಕೆ ಇದುವರೆಗೂ ಬಂದಿಲ್ಲವೇ? | ಹೌದು |
| ಈ) | ನಕಲಿ ವೈದ್ಯರಿಂದ ಚಿಕಿತ್ಸೆ (ಔಷಧ) ಪಡೆದ ಗ್ರಾಮೀಣ ಭಾಗದ ಜನರಿಗೆ ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರುವುದಿಲ್ಲವೇ? ಹಾಗಿದ್ದಲ್ಲಿ ಇದುವರೆಗೂ ಎಷ್ಟು ನಕಲಿ ವೈದ್ಯರ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆ? | ವೈದ್ಯ ವೃತ್ತಿಗೆ ಅರ್ಹರಲ್ಲದ ವ್ಯಕ್ತಿಗಳು ವೈದ್ಯ ವೃತ್ತಿ ನಡೆಸಿದ್ದಲ್ಲಿ, ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದನ್ನು ಅಲ್ಲಗಳೆಯುವಂತಿಲ್ಲ. ಈ ರೀತಿ ನಕಲಿ ವೈದ್ಯರು ಕಂಡುಬಂದಲ್ಲಿ ಪ್ರತಿ ಜಿಲ್ಲೆಯಲ್ಲಿ ನಕಲಿ ವೈದ್ಯರನ್ನು ನಿಗ್ರಹ ಮಾಡುವ ಉದ್ದೇಶದಿಂದ ಜಿಲ್ಲಾವಾರು ಕಾರ್ಯಪಡೆ (task force) ರಚಿಸಿದೆ ಹಾಗೂ ನಕಲಿ ವೈದ್ಯರ ವಿರುದ್ಧ ಜಿಲ್ಲಾ ಆಯುಷ ಅಧಿಕಾರಿಗಳು ಮತ್ತು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಅಧಿಕಾರಿಗಳು ಸೂಕ್ತ ಕಾನೂನು ರೀತಿಯ ಕ್ರಮ ಕೈಗೊಳ್ಳಲು ತಿಳಿಸಿದೆ. ಕೈಗೊಂಡ ಕ್ರಮದ ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಿದೆ. |

**ಸಂಖ್ಯೆ: ಆಕುಕ 61 ಪಿಐಎಂ 2023**

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು